**Bangalore**
**Regional News**
**22.01.2026: 14.30hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು :**

1. ರಾಜ್ಯಪಾಲರ ಭಾಷಣದೊಂದಿಗೆ ರಾಜ್ಯ ವಿಧಾನಮಂಡಲದ ವಿಶೇಷ ಅಧಿವೇಶನ ಪ್ರಾರಂಭ
2. ರಾಜ್ಯದ ಆರ್ಥಿಕ, ಸಾಮಾಜಿಕ ಹಾಗೂ ಭೌತಿಕ ಅಭಿವೃದ್ಧಿಯ ವೇಗವನ್ನು ದ್ವಿಗುಣಗೊಳಿಸಲು ಸರ್ಕಾರ ಕಂಕಣಬದ್ಧ - ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್
3. ಸರ್ಕಾರ ಸಿದ್ಧಪಡಿಸಿದ ಭಾಷಣವನ್ನು ರಾಜ್ಯಪಾಲರು ಪೂರ್ತಿಯಾಗಿ ಓದಿಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ ಆಪಾದನೆ
4. ರಾಜ್ಯಪಾಲರಿಗೆ ಅಗೌರವ ತೋರಿದ ಆರೋಪ; ಶಾಸಕರ ವಿರುದ್ಧ ಕ್ರಮ ಕೈಗೊಳ್ಳಲು ವಿರೋಧ ಪಕ್ಷದ ನಾಯಕ ಆರ್. ಅಶೋಕ ಸಭಾಧ್ಯಕ್ಷರಿಗೆ ದೂರು

**************

ರಾಜ್ಯ ವಿಧಾನಮಂಡಲದ ವಿಶೇಷ ಅಧಿವೇಶನ ರಾಜ್ಯಪಾಲರ ವಾಡಿಕೆಯ ಭಾಷಣದೊಂದಿಗೆ ಇಂದು ಆರಂಭವಾಯಿತು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಜಂಟಿ ಸದನದವನ್ನುದ್ದೇಶಿಸಿ ಮಾತನಾಡಿ, ರಾಜ್ಯದ ಆರ್ಥಿಕ, ಸಾಮಾಜಿಕ ಹಾಗೂ ಭೌತಿಕ ಅಭಿವೃದ್ಧಿಯ ವೇಗವನ್ನು ದ್ವಿಗುಣಗೊಳಿಸಲು ಸರ್ಕಾರ ಕಂಕಣಬದ್ಧವಾಗಿದೆ ಎಂದು ಹೇಳಿದರು. ರಾಜ್ಯಪಾಲರು ಭಾಷಣ ಮುಗಿಸಿ ಸದನದಿಂದ ನಿರ್ಗಮಿಸುತ್ತಿರುವಾಗ ಸದನ ಗದ್ದಲದ ವಾತಾವರಣಕ್ಕೆ ಸಾಕ್ಷಿಯಾಯಿತು. ಇದಕ್ಕೂ ಮುನ್ನ ರಾಜ್ಯಪಾಲ ಥಾವರ್ ಚಂದ್ ಗೇಹ್ಲೋಟ್ ಅವರನ್ನು ವಿಧಾನಮಂಡಲದ ಜಂಟಿ ಅಧಿವೇಶನಕ್ಕೆ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ವಿಧಾನಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾನೂನು ಮತ್ತು ಸಂಸದೀಯ ವ್ಯವಹಾರ ಸಚಿವ ಎಚ್.ಕೆ.ಪಾಟೀಲ್ ಕರೆ ತಂದರು. ಸದನಕ್ಕೆ ಆಗಮಿಸುತ್ತಿದ್ದಂತೆ ರಾಷ್ಟ್ರಗೀತೆ ನುಡಿಸಲಾಯಿತು. ರಾಜ್ಯಪಾಲರು ಜಂಟಿ ಸದನ ಉದ್ದೇಶಿಸಿ ಮಾತನಾಡಿ, ರಾಜ್ಯ ವಿಧಾನಮಂಡಲದ ಜಂಟಿ ಅಧಿವೇಶನಕ್ಕೆ ತಮ್ಮೆಲ್ಲರಿಗೂ ಹೃತ್ಪೂರ್ವಕ ಸ್ವಾಗತ. ಈ ಅಧಿವೇಶನ್ನು ಉದ್ದೇಶಿ ಮಾತನಾಡಲು ನನಗೆ ಸಂತೋಷವಾಗುತ್ತದೆ ಎಂದರು.

**************

ಈ ವರ್ಷದ ಮೊದಲ ಜಂಟಿ ಅಧಿವೇಶನದಲ್ಲಿ ಮಾನ್ಯ ರಾಜ್ಯಪಾಲರು ಸಚಿವ ಸಂಪುಟ ಸಿದ್ಧಪಡಿಸಿದ ಭಾಷಣವನ್ನು ಓದದೇ, ಸಂವಿಧಾನದ ವಿಧಿಗಳನ್ನು ಉಲ್ಲಂಘನೆ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆಪಾದಿಸಿದ್ದಾರೆ. ಅವರು ವಿಧಾನಸೌಧದಲ್ಲಿಂದು ರಾಜ್ಯಪಾಲರ ಭಾಷಣದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು. ಸರ್ಕಾರದ ಸಚಿವ ಸಂಪುಟ ಸಿದ್ಧಪಡಿಸಿರುವ ಭಾಷಣವನ್ನು ಓದಲೇಬೇಕೆಂಬ ನಿಯಮವಿದ್ದು, ರಾಜ್ಯಪಾಲರು ಸಿದ್ಧಪಡಿಸಿದ ಭಾಷಣವನ್ನು ಓದುವಂತಿಲ್ಲ ಎಂದು ಹೇಳಿದರು. ಕೇಂದ್ರ ಸರ್ಕಾರ ತಂದಿರುವ ವಿಕಸಿತ ಭಾರತ ಜಿರಾಮ್ ಜಿ  ಕಾಯ್ದೆಗೆ ತಮ್ಮ ಸರ್ಕಾರದ ತೀವ್ರ ವಿರೋಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

**************

ಸದನದಲ್ಲಿ ರಾಜ್ಯಪಾಲರ ಉಪಸ್ಥಿತಿ ವೇಳೆ ಕಾಂಗ್ರೆಸ್ ಶಾಸಕರು ತೋರಿದ ಅನುಚಿತ ವರ್ತನೆ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ತಕ್ಷಣ ರಾಜೀನಾಮೆ ಕೊಡಬೇಕು ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆಗ್ರಹಿಸಿದ್ದಾರೆ. ವಿಧಾನಸೌಧದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಗೌರವಾನ್ವಿತ ರಾಜ್ಯಪಾಲರು ಬರುವ ಸಂದರ್ಭದಲ್ಲಿ ಮಾನ್ಯ ಮುಖ್ಯಮಂತ್ರಿಗಳು ಅವರನ್ನು ಗೌರವಪೂರ್ವಕವಾಗಿ ಕರೆತರಬೇಕು; ಅವರು ಹೋಗುವಾಗ ಅದೇ ಗೌರವದಿಂದ ಬೀಳ್ಕೊಡಬೇಕೆಂದು ಸಂವಿಧಾನದಲ್ಲಿದೆ. ಸರಕಾರದ ಸಾಧನೆಗಳು, ಸರಕಾರದ ನೀತಿ- ಸಿದ್ಧಾಂತಗಳು ಮತ್ತು ಭವಿಷ್ಯದಲ್ಲಿ ಮಾಡುವ ಕೆಲಸಗಳನ್ನು ಭಾಷಣದಲ್ಲಿ ತಿಳಿಸಬೇಕಿತ್ತು. ಆದರೆ, ಇವರು ಕೇಂದ್ರದ ವಿರುದ್ಧ ಅಸಾಂವಿಧಾನಿಕವಾಗಿ, ಸಂಘರ್ಷ ಮಾಡುವ ರೀತಿಯಲ್ಲಿ ಪ್ರೇರೇಪಣೆ ಮಾಡಲು ಹೊರಟಿದ್ದರು ಎಂದು ಆಕ್ಷೇಪಿಸಿದರು.

**************

ಕಾಂಗ್ರೆಸ್ ಸರ್ಕಾರ, ರಾಜ್ಯಪಾಲರಿಗೆ ಅಗೌರವ ತೋರಿ ಸಂವಿಧಾನಕ್ಕೆ ಅಪಮಾನ ಮಾಡಿದೆ ಎಂದು ವಿಧಾನಸಭೆಯಲ್ಲಿನ ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ರಾಜ್ಯಪಾಲರ ಭಾಷಣದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಅಧಿವೇಶನದ ದಿನವನ್ನು ಕರಾಳ ದಿನವನ್ನಾಗಿಸಿದೆ. ರಾಜ್ಯಪಾಲರು ರಾಜ್ಯ ಹಾಗೂ ಕೇಂದ್ರ ಸರ್ಕಾರದ ನಡುವೆ ಸೇತುವೆಯಂತೆ ಕೆಲಸ ಮಾಡುತ್ತಾರೆ. ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಸಾಂಕೇತಿಕವಾಗಿ ಭಾಷಣ ಮಂಡಿಸಿ ಧನ್ಯವಾದ ಹೇಳಿ ಹೋಗಿದ್ದಾರೆ. ಈ ಹಿಂದೆ ರಾಜ್ಯಪಾಲರಾಗಿದ್ದ ಹಂಸರಾಜ್ ಬಾರಧ್ವಾಜ್ ಕೂಡ ಹಾಗೆಯೇ ಮಾಡಿದ್ದರು. ಇದರಲ್ಲಿ ತಪ್ಪೇನೂ ಇಲ್ಲ ಎಂದು ಹೇಳಿದರು. ಕಾಂಗ್ರೆಸ್ ಶಾಸಕರು ರಾಜ್ಯಪಾಲರೊಂದಿಗೆ ಅನುಚಿತವಾಗಿ ವರ್ತಿಸಿದ್ದಾರೆ. ಸದನದ

ನಿಯಮಾವಳಿ ಪ್ರಕಾರ ರಾಜ್ಯಪಾಲರು ಭಾಷಣ ಮಾಡುವಾಗ ಯಾವುದೇ ಸದಸ್ಯರು ಅಡ್ಡಿ ಮಾಡುವಂತಿಲ್ಲ, ಆ ರೀತಿ ಮಾಡಿದರೆ ಅದನ್ನು ತೀವ್ರ ಉಲ್ಲಂಘನೆ ಎಂದು ಪರಿಗಣಿಸಬೇಕಾಗುತ್ತದೆ. ಆದ್ದರಿಂದ ಸ್ಪೀಕರ್ ಯು.ಟಿ.ಖಾದರ್ ಅವರು ತಪ್ಪಿತಸ್ಥ ಸದಸ್ಯರನ್ನು ಶಿಕ್ಷೆಗೆ ಒಳಪಡಿಸಬೇಕು ಹಾಗೂ ಸದನದಿಂದ ಹೊರಗೆ ಹಾಕಬೇಕು ಎಂದು ಒತ್ತಾಯಿಸಿದರು.

**************

ರಾಜ್ಯ ಸರಕಾರವು ತನ್ನ ವೈಫಲ್ಯಗಳನ್ನು ಮುಚ್ಚಿ ಹಾಕಿಕೊಳ್ಳುವ ಸಲುವಾಗಿ ಕೇಂದ್ರ ಸರಕಾರದ ವಿರುದ್ಧ ದ್ವೇಷ ರಾಜಕಾರಣ ಮಾಡಲು ಸದನವನ್ನು ಬಳಸುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ದೂರಿದ್ದಾರೆ. ಬೆಂಗಳೂರಿನಲ್ಲಿಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಸದನದ ಒಳಗಡೆ ಗೌರವಾನ್ವಿತ ರಾಜ್ಯಪಾಲರಿಗೆ ಅಗೌರವ ಸೂಚಿಸುವ ಕೆಲಸವನ್ನು ಆಡಳಿತ ಪಕ್ಷದವರು ಮಾಡಿದ್ದಾರೆ. ರಾಜ್ಯ ಸರ್ಕಾರ ಸದನದ ದುರ್ಬಳಕೆಯನ್ನೂ ಮಾಡುತ್ತಿದೆ ಎಂದು ಟೀಕಿಸಿದರು. ಕೇಂದ್ರ ಸರಕಾರವು ಮನ್ರೇಗಾದಲ್ಲಿ ಸುಧಾರಣೆ ತಂದು ವಿಕಸಿತ ಭಾರತ್ ಜಿ ರಾಮ್ ಜಿ ಎಂದು ಕೆಲವು ಮಾರ್ಪಾಡುಗಳನ್ನು ಮಾಡಿದೆ. ಈ ಬಗ್ಗೆ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರಕಾರವು ಅಪಪ್ರಚಾರಗಳನ್ನು ಪ್ರಾರಂಭಿಸಿದೆ ಎಂದು ಆರೋಪಿಸಿದರು.

**************

ಕೊಪ್ಪಳ ಜಿಲ್ಲೆಯ ವಿವಿಧ ಪ್ರವಾಸಿ ತಾಣಗಳ ಬಗ್ಗೆ ಪರಿಚಯ ಮಾಡಿಕೊಡುವ "ಕೊಪ್ಪಳ ಅನ್ವೇಷಿಸಿ" ಕಾರ್ಯಕ್ರಮಕ್ಕೆ ನಿನ್ನೆ ಚಾಲನೆ ನೀಡಲಾಯಿತು. ಕೊಪ್ಪಳ ಜಿಲ್ಲಾಡಳಿತ ಭವನದ ಪ್ರಾಂಗಣದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಸಂಸದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ಪದ್ಮಶ್ರೀ ಪುರಸ್ಕೃತರಾದ ಭೀಮವ್ವ ಶಿಳ್ಳೆಕ್ಯಾತರ್ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.
ಕೊಪ್ಪಳದ ಅಂಜಲಿ ಭರತನಾಟ್ಯ ಕೇಂದ್ರದ ಕಲಾವಿದರು ಭರತನಾಟ್ಯ ನೃತ್ಯ ಮಾಡಿದರು. ಪದ್ಮಶ್ರೀ ಪುರಸ್ಕೃತರಾದ ಭೀಮವ್ವ ಶಿಳ್ಳೆಕ್ಯಾತರ್ ಅವರ ತಂಡದವರು ತೊಗಲು ಗೊಂಬೆಯಾಟ ಪ್ರದರ್ಶನ ನೀಡಿದರೆ ಹೊಸಳ್ಳಿಯ ಹುಲಿಗೆಮ್ಮ ಹಂದ್ರಾಳ ಮತ್ತು ತಂಡದವರು ಗೀಗೀ ಪದಗಳನ್ನು ಹಾಡಿದರು. ಈ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಪ್ರದೇಶಗಳ ಪ್ರಸಿದ್ಧ ಬ್ಲಾಗರ್, ಇನ್ಪುಯೆನ್ಸರ್ ಮತ್ತು ಟೂರ್ ಆಪರೇಟರಗಳು, ಕೊಪ್ಪಳ ಜಿಲ್ಲೆಯ ಐತಿಹಾಸಿಕ ಪ್ರವಾಸಿ ತಾಣಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಈ ಸಂದರ್ಭದಲ್ಲಿ ಜಿಲ್ಲೆಯ ಸಾಂಸ್ಕೃತಿಕ ಚಿತ್ರಣ ನೀಡುವ ಕಾರ್ಯಕ್ರಮ ನಡೆಯಿತು. ಸರ್ಕಾರದ ವಿವಿಧ ಇಲಾಖೆಗಳ ಆಶ್ರಯದಲ್ಲಿ ಮೂರು ದಿನಗಳ ಈ ಕಾರ್ಯಕ್ರಮ ಆಯೋಜಿಸಲಾಗಿದೆ.

**************

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಹಾತ್ಮ ಗಾಂಧೀಜಿಯವರ ೧೫೬ನೇ ಜಯಂತಿ ಅಂಗವಾಗಿ ನಡೆದ ರಾಜ್ಯ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ಮಂಗಳೂರಿನ ರಥಬೀದಿಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿ ಮೇಘ ಪ್ರಥಮ ಸ್ಥಾನ ಪಡೆದಿದ್ದಾರೆ. 'ಮೌಲ್ಯಾಧಾರಿತ ನಾಯಕತ್ವ ಹಾಗೂ ನೈತಿಕ ರಾಜಕಾರಣ- ಯುವಕರಿಗೆ ಗಾಂಧೀಜಿಯವರ ಪಾಠ' ಎಂಬ ವಿಷಯ ಕುರಿತು ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿತ್ತು. ರಾಜ್ಯ ಮಟ್ಟದಲ್ಲಿ ಆಯೋಜಿಸಿದ್ದ ಈ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಮೇಘಾ ಅವರಿಗೆ ೩೧ಸಾವಿರ ನಗದು ಪುರಸ್ಕಾರ ಲಭಿಸಿದೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿರುವ ಮೇಘಾ ಅವರು, ರಾಜ್ಯಮಟ್ಟದಲ್ಲಿ ಪ್ರಥಮಸ್ಥಾನ ಪಡೆದಿರುವುದಕ್ಕೆ ತುಂಬಾ ಖುಷಿಯಾಗಿದೆ. ನನಗೆ ಪ್ರೋತ್ಸಾಹ ನೀಡಿದ ಉಪನ್ಯಾಸಕರು, ಪೋಷಕರಿಗೆ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದ್ದಾರೆ.

**************

ಉತ್ತರಕನ್ನಡ ಜಿಲ್ಲೆಯ ಶಿರಸಿ ತಾಲೂಕಿನ ಬನವಾಸಿಯಲ್ಲಿ ಗಣರಾಜ್ಯೋತ್ಸವ-೨೦೨೬ರ ಅಂಗವಾಗಿ ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆ ೨೦೨೫, ವಂದೇ ಮಾತರಂ ಗೀತೆಯ ೧೫೦ನೇ ವರ್ಷಾಚರಣೆ ಹಾಗೂ ಕೇಂದ್ರ ಪುರಸ್ಕೃತ ಯೋಜನೆಗಳ ಕುರಿತು ವಿಶೇಷ ಕಾರ್ಯಕ್ರಮ ನಡೆಯಿತು. ಕೇಂದ್ರ ಸಂವಹನ ಇಲಾಖೆ ಶಿವಮೊಗ್ಗ ಘಟಕ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ, ಗ್ರಾಮ ಪಂಚಾಯಿತಿ ಆಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

**************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ದ್ಯಾವರಹಳ್ಳಿ ಕೆರೆ ಅಭಿವೃದ್ಧಿ ಕಾಮಗಾರಿಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್. ಮುನಿಯಪ್ಪ ಇಂದು ಗುದ್ದಲಿ ಪೂಜೆ ನೆರವೇರಿಸಿದರು. ಕೆರೆ ಅಭಿವೃದ್ಧಿಗಾಗಿ ಕೈಗೊಳ್ಳಲಿರುವ ಕಾಮಗಾರಿಗಳನ್ನು ಪರಿಶೀಲಿಸಿ ಮಾತನಾಡಿದ ಅವರು, ದ್ಯಾವರಹಳ್ಳಿ ಕೆರೆಯು ೮ ಎಕರೆ ವಿಸ್ತೀರ್ಣ ಹೊಂದಿದ್ದು ಖಾಸಗಿ ಸಂಸ್ಥೆ ಸಹಭಾಗಿತ್ವದಲ್ಲಿ ಸುಮಾರು ಒಂದು ಕೋಟಿ ರೂಪಾಯಿ ಸಿಎಸ್‌ಆರ್ ಅನುದಾನದಲ್ಲಿ ಅಭಿವೃದ್ಧಿ ಪಡಿಸಲಾಗುತ್ತಿದೆ ಎಂದರು. ಕೆರೆ ಹೂಳೆತ್ತೆವುದು, ಕೆರೆ ಏರಿಗೆ ಕಲ್ಲು ಹಾಸುವಿಕೆ, ಕೆರೆ ಏರಿ ದುರಸ್ತಿ, ನಾಲಾ ಅಭಿವೃದ್ಧಿ, ಕೋಡಿ ದುರಸ್ತಿ, ತೂಬು ದುರಸ್ತಿ ಕಾಮಗಾರಿ ನಡೆಯಲಿದೆ. ಕೆರೆ ಅಭಿವೃದ್ಧಿಯಿಂದ ಈ ಭಾಗದ ಜನರಿಗೆ ಅನುಕೂಲವಾಗಲಿದೆ, ಅಂತರ್ಜಲ ಮಟ್ಟ ಹೆಚ್ಚಾಗಲಿದ್ದು ರೈತರಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

******END******